All India Radio: Bangalore
Regional Bulletin In Kannada
06.10.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

06.10.2025 / 2.30 p.m.
ಮುಖ್ಯಾಂಶಗಳು

೧. ಪ್ರಗತಿ ಪರಿಶೀಲನೆ ಬಳಿಕ ಸಮೀಕ್ಷೆ ಅವಧಿ ವಿಸ್ತರಣೆ ಬಗ್ಗೆ ತೀರ್ಮಾನ - ಮುಖ್ಯಮಂತ್ರಿ ಸಿದ್ದರಾಮಯ್ಯ

೨. ರಾಜ್ಯದ ಎರಡು ಸಿರಪ್ ಮಾದರಿಗಳಲ್ಲಿ ವಿಷಕಾರಿ ಅಂಶ ಪತ್ತೆ - ಅರೋಗ್ಯ ಇಲಾಖೆಯಿಂದ ಇಂದು ಮಾರ್ಗಸೂಚಿ

೩. ದೀಪಾವಳಿಗೆ ಹಸಿರು ಪಟಾಕಿ ಮಾರಾಟಕ್ಕೆ ಮಾತ್ರ ಅನುಮತಿ ; ನಿಯಮ ಉಲ್ಲಂಘಿಸಿದರೆ ಪರವಾನಿಗೆ ರದ್ದು - ಸಚಿವ ಈಶ್ವರ ಖಂಡ್ರೆ

೪. ಬೆಂಗಳೂರಿನಲ್ಲಿ ನಾರ್ವೆ ರಾಯಭಾರಿ ಮೇ ಎಲಿನ್ ಸ್ಟೆನರ್ ಅವರರೊಂದಿಗೆ ಸಚಿವ ಪ್ರಿಯಾಂಕ ಖರ್ಗೆ ಚರ್ಚೆ

೫. ಹಾಸನಾಂಬ ದೇವಾಲಯಕ್ಕೆ ಒಡವೆ ಹಸ್ತಾಂತರಿಸಿದ ಜಿಲ್ಲಾಡಳಿತ

><><><><

ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯಲ್ಲಿ ಯಾವ ಜಾತಿಯವರನ್ನು ತುಳಿಯುವ ಪ್ರಶ್ನೆಯಿಲ್ಲ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಕೊಪ್ಪಳದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಸಮಸಮಾಜವನ್ನು ಬಯಸದವರು ಸಮೀಕ್ಷೆಯನ್ನು ವಿರೋಧಿಸುತ್ತಿದ್ದಾರೆ ಎಂದು ಹೇಳಿದ್ದಾರೆ. ಈಗಾಗಲೇ ೧.೧೦ ಕೋಟಿ ಕುಟುಂಬಗಳ ಸಮೀಕ್ಷಾ ಕಾರ್ಯ ಮುಗಿದಿದ್ದು, ನಿನ್ನೆವರೆಗೆ ಶೇಕಡಾ ೬೩ ರಷ್ಟು ಸರ್ವೇ ಕಾರ್ಯ ಪ್ರಗತಿಯಾಗಿದೆ. ನಾಳೆ ಸಂಜೆವರೆಗೆ ಸಮೀಕ್ಷೆಯ ಪ್ರಗತಿಯನ್ನು ಪರಿಶೀಲಿಸಿ, ಸಮೀಕ್ಷೆ ಅವಧಿ ವಿಸ್ತರಣೆ ಬಗ್ಗೆ ತೀರ್ಮಾನ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ

ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಅವರು ಸಮೀಕ್ಷೆಯಲ್ಲಿ ಪಾಲ್ಗೊಳ್ಳುವುದಿಲ್ಲ ಎಂಬ ಬಗ್ಗೆ ಪ್ರತಿಕ್ರಿಯೆ ನೀಡಿ, ಕೇಂದ್ರ ಸರ್ಕಾರ ನಡೆಸಲಿರುವ ಜಾತಿಗಣತಿಗೂ ವಿರೋಧ ವ್ಯಕ್ತಪಡಿಸುತ್ತಾರೆಯೇ ಎಂದು ಪ್ರಶ್ನಿಸಿದ್ದಾರೆ. ಬಲ್ಡೋಟಾ ಕಾರ್ಖಾನೆಯ ವಿಚಾರ ನ್ಯಾಯಾಲಯದಲ್ಲಿದ್ದು, ತೀರ್ಪಿನ ನಂತರ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ವಿವಿಧ ರಾಜ್ಯದಲ್ಲಿ ಕೆಮ್ಮಿನ ಔಷಧಿಯಿಂದ ಮಕ್ಕಳು ಅಸುನೀಗುತ್ತಿದ್ದು, ಈ ಬಗ್ಗೆ ಗಮನಹರಿಸುವಂತೆ ಆರೋಗ್ಯ ಇಲಾಖೆಗೆ ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಸ್ಪಷ್ಟಪಡಿಸಿದ್ದಾರೆ.

><><><><

ರಾಜ್ಯದಲ್ಲಿ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸಮೀಕ್ಷೆ ಸರಿಯಾದ ರೀತಿಯಲ್ಲಿ ಮುಗಿಯಲು ಜನತೆಯ ಸಹಕಾರ ಅತ್ಯಗತ್ಯ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗಣತಿದಾರರು ಮನೆಗೆ ಬಂದಾಗ ಸರಿಯಾದ ಮಾಹಿತಿಯನ್ನು ನೀಡಿ ಸಹಕರಿಸಬೇಕು.

ಪ್ರತಿಯೊಬ್ಬರ ಸಹಕಾರದಿಂದ ಮಾತ್ರ ಸಮೀಕ್ಷೆ ಯಶಸ್ವಿಯಾಗಿ ಪೂರ್ಣಗೊಳ್ಳಲು ಸಾಧ್ಯ ಎಂದು ತಿಳಿಸಿದ್ದಾರೆ. ಇದೇ ೮ರಿಂದ ಶಾಲೆಗಳು ಪುನರಾರಂಭಗೊಳ್ಳಲಿದ್ದು ಸಮೀಕ್ಷೆ ಪೂರ್ಣಗೊಳ್ಳದಿದ್ದರೆ ಶಿಕ್ಷಕರು ಶಾಲಾ ಆರಂಭಕ್ಕೆ ಮುನ್ನ ಅಥವಾ ಶಾಲೆ ಬಿಟ್ಟ ಬಳಿಕ ಶನಿವಾರ ಮತ್ತು ಭಾನುವಾರ ಹಾಗೂ ರಜಾ ದಿನಗಳಲ್ಲಿ ಸಮೀಕ್ಷೆ ನಡೆಸುವುದು, ಮುಂತಾದ ವಿಷಯಗಳ ಬಗ್ಗೆ ಆಯೋಗದ ಸೂಚನೆಯ ಬಳಿಕ ನಿರ್ಧರಿಸಲಾಗುವುದು ಎಂದು ಹೇಳಿದ್ದಾರೆ. ಸಮನ್ವಯತೆ, ಮ್ಯಾಪಿಂಗ್ ಸಮಸ್ಯೆಯಿಂದಾಗಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಸಮೀಕ್ಷೆ ವಿಳಂಬವಾಗಿದೆ. ಸುಳ್ಯದಲ್ಲಿ ಶೇಕಡಾ ೧೦೦ ಸಮೀಕ್ಷೆ ಪೂರ್ಣಗೊಂಡಿದ್ದು, ಮಂಗಳೂರಿನಲ್ಲಿ ಕೇವಲ ಶೇಕಡಾ ೪೮ರಷ್ಟು ಸಮೀಕ್ಷೆಯಷ್ಟೇ ನಡೆದಿದೆ ಎಂದು ಮಧು ಬಂಗಾರಪ್ಪ ಸ್ಪಷ್ಟಪಡಿಸಿದ್ದಾರೆ.

><><><><

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ರಾಜ್ಯದ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಮಾಹಿತಿ ಸಂಗ್ರಹಿಸುವ ಸಮೀಕ್ಷೆ ಕಾರ್ಯ ಮುಂದುವರಿದಿದೆ. ರಾಜ್ಯದ ೧.೦೯ ಕೋಟಿ ಮನೆಗಳ ಸಮೀಕ್ಷೆ ಪೂರ್ಣಗೊಂಡಿದ್ದು, ಸಮೀಕ್ಷೆಯ ನಿಗದಿತ ಗುರಿ ಸಾಧನೆಯಲ್ಲಿ ಕೊಪ್ಪಳ ಜಿಲ್ಲೆ ಪ್ರಥಮ, ಹಾವೇರಿ ಜಿಲ್ಲೆ ದ್ವಿತೀಯ ಸ್ಥಾನದಲ್ಲಿದೆ ಎಂದು ಹಾವೇರಿ ಜಿಲ್ಲಾಧಿಕಾರಿ ಡಾ. ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ನಾಳೆಯವರೆಗೂ ಸಮೀಕ್ಷೆ ನಡೆಸಲು ಅವಕಾಶವಿದ್ದು, ಎರಡೂ ಜಿಲ್ಲೆಗಳಲ್ಲಿ ಇಂದು ಸಮೀಕ್ಷೆ ಪೂರ್ಣಗೊಳ್ಳುವ ಸಾಧ್ಯತೆ ಇದೆ ಎಂದು ಜಿಲ್ಲಾಧಿಕಾರಿ ಸ್ಪಷ್ಟಪಡಿಸಿದ್ದಾರೆ. ಸಮೀಕ್ಷೆ ಕಾರ್ಯದಲ್ಲಿ, ಉತ್ತರ ಕನ್ನಡ ಜಿಲ್ಲೆಯಲ್ಲಿ ಈವರೆಗೆ ೨ ಲಕ್ಷದ ೬೨ ಸಾವಿರ ೯೦೩ ಮನೆಗಳ ಸಮೀಕ್ಷೆಯನ್ನು ಪೂರ್ಣಗೊಳಿಸಲಾಗಿದೆ. ಸಮೀಕ್ಷೆ ಕಾರ್ಯದಲ್ಲಿ ಜಿಲ್ಲೆಯಲ್ಲಿ ಇದುವರೆಗೂ ಶೇಕಡಾ ೮೦.೪೩ ರಷ್ಟು ಸಾಧನೆ ಮಾಡಲಾಗಿದೆ.ಅಂಕೋಲಾ ತಾಲ್ಲೂಕಿನಲ್ಲಿ ಸಮೀಕ್ಷೆಯು ಶೇಕಡಾ ೧೦೦ ರಷ್ಟು ಪೂರ್ಣಗೊಂಡಿದೆ.

><><><><

ರಾಜ್ಯದಲ್ಲಿ ಎರಡು ಕೆಮ್ಮಿನ ಸಿರಪ್ ಮಾದರಿಗಳಲ್ಲಿ ಅಸಾಮಾನ್ಯ ಅಂಶಗಳು ಪತ್ತೆಯಾಗಿರುವ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆ ಎಚ್ಚರಿಕೆ ಕ್ರಮ ಕೈಗೊಂಡಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಹಾಸನ ಜಿಲ್ಲೆಯ ಚನ್ನರಾಯಪಟ್ಟಣದಲ್ಲಿ ಮಾತನಾಡಿದ ಅವರು, ಕರ್ನಾಟಕದಲ್ಲೂ ಈಗ ಎರಡು ಸಿರಫ್ ಮಾದರಿಗಳು ಪತ್ತೆಯಾಗಿವೆ. ಇಂದು ಸಾರ್ವಜನಿಕರಿಗೆ ಆರೋಗ್ಯ ಇಲಾಖೆಯಿಂದ ಮಾರ್ಗಸೂಚಿ ಬಿಡುಗಡೆ ಮಾಡಲಾಗುತ್ತಿದ್ದು, ಯಾವ ರೀತಿ ಎಚ್ಚರಿಕೆ ವಹಿಸಬೇಕು ಎಂಬುದರ ಕುರಿತು ಸ್ಪಷ್ಟ ಸೂಚನೆ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಕೆಮ್ಮಿನ ಸಿರಫ್ ತಯಾರಿಕಾ ಘಟಕಗಳು ಮತ್ತು ಸರಬರಾಜುದಾರರ ನಡುವೆ ಸಂವಹನದ ಕೊರತೆ ಹಾಗೂ ನಿರ್ಲಕ್ಷ್ಯದಿಂದ ಈ ರೀತಿಯ ಘಟನೆಗಳು ನಡೆಯುತ್ತಿವೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಈ ಕೆಮ್ಮಿನ ಸಿರಪ್ ಕರ್ನಾಟಕದಲ್ಲಿ ಸರಬರಾಜಾಗಿಲ್ಲ. ಆದರೆ ತಮಿಳುನಾಡು, ಮಧ್ಯಪ್ರದೇಶ, ಪುದುಚೇರಿ, ರಾಜಸ್ಥಾನ ಹಾಗೂ ಒಡಿಶಾದಲ್ಲಿ ಬಳಕೆಯಾಗಿರುವ ಮಾಹಿತಿ ಲಭ್ಯವಾಗಿದೆ. ಈ ಸಿರಫ್‌ಗಳಲ್ಲಿ ಡೈ ಎಥಿಲಿನ್ ಕಾಲ್ ಎಂಬ ಹಾನಿಕರ ರಾಸಾಯನಿಕ ಅಂಶ ಬಳಕೆಯಾಗಿದೆ. ಮಕ್ಕಳಿಗೆ ಕೆಮ್ಮಿನ ಸಿರಪ್ ನೀಡುವಾಗ ಪಾಲಕರು ಎಚ್ಚರಿಕೆ ವಹಿಸಬೇಕು ಎಂದು ಸಲಹೆ ನೀಡಿದ್ದಾರೆ.

><><><><

ವಿಧಾನಸೌಧದಲ್ಲಿ ಇಂದು ನಡೆದ ಕಾರ್ಯಕ್ರಮದಲ್ಲಿ ಪರಿಸರಸ್ನೇಹಿ ವಾಹನಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಅರಣ್ಯ ಸಚಿವ ಈಶ್ವರ್ ಖಂಡ್ರೆ, ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್, ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಪಿ.ಎಂ. ನರೇಂದ್ರ ಸ್ವಾಮಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

><><><><

ದೀಪಾವಳಿ ಹಬ್ಬಕ್ಕೆ ಹಸಿರು ಪಟಾಕಿ ಮಾತ್ರ ಬಳಕೆ ಮಾಡಬೇಕು. ಹಸಿರು ಪಟಾಕಿ ಬಿಟ್ಟು ಬೇರೆ ಪಟಾಕಿ ಮಾರಾಟ ಮಾಡಿದರೆ ಅಂತಹ ಅಂಗಡಿ ಪರವಾನಿಗೆ ರದ್ದು ಮಾಡುವುದಾಗಿ ಸಚಿವ ಈಶ್ವರ್ ಖಂಡ್ರೆ ಎಚ್ಚರಿಕೆ ನೀಡಿದ್ದಾರೆ. ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೀಪಾವಳಿಯಲ್ಲಿ ಹಸಿರು ಪಟಾಕಿ ಮಾತ್ರ ಹಚ್ಚಬೇಕು. ಈ ಸಂಬಂಧ ಸುಪ್ರೀಂ ಕೋರ್ಟ್ ಆದೇಶ ಇದೆ. ಸುಪ್ರೀಂ ಕೋರ್ಟ್ ಆದೇಶ ಇದ್ದರೂ, ಭಾರ ಇರುವ, ಲೋಹ ಭರಿತ ಪಟಾಕಿ ಬಳಕೆ ಆಗುತ್ತಿದೆ. ಈ ಹಿನ್ನೆಲೆಯಲ್ಲಿ ಮಳಿಗೆಗಳಿಗೆ ಹೋಗಿ ಪರಿಶೀಲನೆ ನಡೆಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಯಾರಾದರೂ ನಿಯಮ ಉಲ್ಲಂಘನೆ ಮಾಡಿ ಪಟಾಕಿ ಮಾರಿದರೆ ಅವರ ಪರವಾನಿಗೆ ರದ್ದು ಮಾಡಲು ಕ್ರಮ ತೆಗೆದುಕೊಳ್ಳಲು ಸೂಚನೆ ನೀಡಲಾಗಿದೆ ಎಂದು ಹೇಳಿದ್ದಾರೆ.

><><><><

ಭಾರತದಲ್ಲಿನ ನಾರ್ವೆಯ ರಾಯಭಾರಿ ಮೇ-ಎಲಿನ್ ಸ್ಟೆನರ್ ಅವರನ್ನು ಇಂದು ಗ್ರಾಮೀಣಾಭಿವೃದ್ಧಿ ಹಾಗೂ ಐಟಿ ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಭೇಟಿ ಮಾಡಿ ಚರ್ಚೆ ನಡೆಸಿದ್ದಾರೆ. ಭಾರತ-ನಾರ್ವೆ ಸಂಬಂಧಗಳನ್ನು ಬಲಪಡಿಸುವಲ್ಲಿ ಕರ್ನಾಟಕದ ಕ್ರಿಯಾತ್ಮಕ ತಂತ್ರಜ್ಞಾನ ಇಕೋ ಸಿಸ್ಟಂ ಹೇಗೆ ಪ್ರಮುಖ ಪಾತ್ರ ವಹಿಸುತ್ತದೆ ಎಂಬುದರ ಕುರಿತು ಚರ್ಚಿಸಲಾಗಿದೆ.ಮುಂಬರುವ ಬೆಂಗಳೂರು ಟೆಕ್ ಸಮ್ಮಿಟ್ ೨೦೨೫ ಮತ್ತು ಅದರಲ್ಲಿ ನಾರ್ವೆಯ ಸಕ್ರಿಯ ಭಾಗವಹಿಸುವಿಕೆಯ ಬಗ್ಗೆಯೂ ಚರ್ಚಿಸಲಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಭಾರತದಲ್ಲಿನ ಸುಮಾರು ೧೩೦ ನಾರ್ವೆ ಮೂಲದ ಕಂಪೆನಿಗಳಲ್ಲಿ, ದೊಡ್ಡ ಪಾಲು ಈಗ ಬೆಂಗಳೂರಿನಲ್ಲಿ ಕಾರ್ಯ ನಿರ್ವಹಿಸುತ್ತಿದೆ ಎಂದು ಅವರು ಹೇಳಿದ್ದಾರೆ.

><><><><

ಇದೇ ೯ ರಿಂದ ಆರಂಭವಾಗುವ ಹಾಸನಾಂಬ ಹಾಗೂ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಹಿನ್ನೆಯಲ್ಲಿ ಜಿಲ್ಲಾ ಖಜಾನೆಯಿಂದ ಇಂದು ಹಾಸನಾಂಬ ದೇವಿಯ ಒಡವೆಗಳನ್ನು ದೇವಾಲಯಕ್ಕೆ ರವಾನಿಸಲಾಯಿತು. ಒಡವೆಗಳಿಗೆ ತಹಸಿಲ್ದಾರ್ ಗೀತಾ ಹಾಗೂ ಖಜಾನೆ ಇಲಾಖೆಯ ಅಧಿಕಾರಿಗಳು ಹಾಗೂ ದೇವಾಲಯದ ಅರ್ಚಕರ ಸಮ್ಮುಖದಲ್ಲಿ ವಿಶೇಷ ಪೂಜೆ ನಡೆಯಿತು. ಬಳಿಕ ಅಲಂಕೃತ ಬೆಳ್ಳಿ ರಥದಲ್ಲಿ ಒಡವೆಗಳನ್ನು ಇರಿಸಿ ನಗರದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ಮೂಲಕ ಹಾಸನಾಂಬ ದೇವಾಲಯಕ್ಕೆ ಕೊಂಡೊಯಲಾಯ್ತು.

><><><><